**ದಿನಾಂಕಃ 09.10.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀಮತಿ.ಎಸ್.ಕೆ.ಪಿ ರವರಿಂದಃ**

1) ನಾನು ಈ ಪ್ರಕರಣದಲ್ಲಿ ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು, **ಪ್ರಥಮ ವರ್ತಮಾನವನ್ನು ನಿ.ಪಿ.2** ಎಂದು, ಸ್ಥಳ ಪಂಚನಾಮೆಯನ್ನು ನಿ.ಪಿ.**3** ಎಂದು, ಗಾಯದ ಪ್ರಮಾಣ ಪತ್ರವನ್ನು ನಿ.ಪಿ.**4** ಎಂದು, ವಾಹನ ತಪಾಸಣಾ ವರದಿಯನ್ನು ನಿ.ಪಿ.**5** ಎಂದು ಗುರುತಿಸಿದೆ.

3) **ಐ.ಎಂ.ವಿ ಕಾಯ್ದೆ ಕಲಂ 133** ರ ಅಡಿಯಲ್ಲಿ ನೀಡಿರುವಂತಹ ನೋಟಿಸ್ ಗೆ ನೀಡಿರುವಂತಹ ಉತ್ತರವನ್ನು ನಿ.ಪಿ.**6** ಎಂದು ಮತ್ತು ಅಂತಿಮ ವರದಿಯನ್ನು ನಿ.ಪಿ.**7** ಎಂದು ಗುರುತಿಸಿದೆ.

**ಸೂಚನೆಃ** ನಿ.ಪಿ.1 ರಿಂದ ನಿ.ಪಿ.7 ಎಂದು ಗುರುತು ಆಗಿರುವ ದಾಖಲೆಗಳು ಕ್ಯಾತ್ಸಂದ್ರ ಪೋಲಿಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

4) ವಿನಾಯಕ ಆಸ್ಪತ್ರೆಯವರು ನೀಡಿರುವ ಫೈನಲ್ ಬಿಲ್ಲನ್ನು **ನಿ.ಪಿ.8** ಎಂದು ಗುರುತಿಸಿದೆ.

5) ಈಗ ಸಾಕ್ಷಿದಾರರು ತಮ್ಮ ಮೂಲ ಆಧಾರ್ ಕಾರ್ಡ್ ಮತ್ತು ಗುರುತಿನ ಚೀಟಿ ದಾಖಲೆಗಳು ಮತ್ತು ಇದೇ ದಾಖಲೆಗಳ ಫೋಟೋ ಪ್ರತಿಗಳನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಗಳನ್ನು ಮತ್ತು ಫೋಟೋ ಪ್ರತಿಗಳನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಗಳನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಗಳನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಗಳನ್ನು **ನಿ.ಪಿ.9 ಮತ್ತು ನಿ.ಪಿ.10** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಗಳನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

**ಈ ಹಂತದಲ್ಲಿ ಮತ್ತೆ ಕೆಲವು ದಾಖಲೆಗಳನ್ನು ಹಾಜರುಪಡಿಸಲು ಸಾಕ್ಷಿದಾರರು ಸಮಯ ಕೇಳಿದ್ದಾರೆ, ಸಮಯ ನೀಡಿದೆ.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.